**All India Radio: Bangalore**
**National Bulletin In Kannada**
**19.09.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪುಗಳಲ್ಲಿ ಎದುರಿಸುವ ಪ್ರಯತ್ನಗಳನ್ನು ಬಲಪಡಿಸಲು ಜಗತ್ತಿಗೆ ಭಾರತ ಕರೆ
2. ಗ್ರೀಕ್ ಪ್ರಧಾನಿಯೊಂದಿಗೆ, ಪ್ರಧಾನಿ ನರೇಂದ್ರ ಮೋದಿ ಮಾತುಕತೆ ; ಉಭಯ ದೇಶಗಳ ನಡುವಿನ ಕಾರ್ಯತಂತ್ರದ ಪಾಲುದಾರಿಕೆ ಬಲಪಡಿಸಲು ಪರಸ್ಪರ ಒಪ್ಪಿಗೆ
3. ನಿಯಮ ಉಲ್ಲಂಘನೆ ; ೪೭೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳು ಪಟ್ಟಿಯಿಂದ ಹೊರಕ್ಕೆ
4. ಏಷ್ಯಾಕಪ್ ಟಿ-೨೦ ಕ್ರಿಕೆಟ್ ; ಎ ಗುಂಪಿನ ಪಂದ್ಯದಲ್ಲಿಂದು ಭಾರತ -ಒಮಾನ್ ಮುಖಾಮುಖಿ

<><><><>

ಭಯೋತ್ಪಾದನೆಯನ್ನು ಅದರ ಎಲ್ಲಾ ರೂಪಗಳು ಮತ್ತು ಅಭಿವ್ಯಕ್ತಿಗಳಲ್ಲಿ ಎದುರಿಸುವ ಪ್ರಯತ್ನಗಳನ್ನು ಬಲಪಡಿಸಲು ಮತ್ತು ತೀವ್ರಗೊಳಿಸಲು ಭಾರತ ಜಗತ್ತಿಗೆ ಕರೆ ನೀಡಿದೆ ಎಂದು ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. ಪಾಕಿಸ್ತಾನದಲ್ಲಿನ ಭಯೋತ್ಪಾದಕ ಸಂಘಟನೆಗಳ ಇತ್ತೀಚಿನ ವಿಡಿಯೋಗಳ ಕುರಿತು ಪ್ರಶ್ನೆಗೆ ಉತ್ತರಿಸಿದ ಅವರು, ಪ್ರತಿಯೊಂದು ರಾಷ್ಟ್ರವು ಗಡಿಯಾಚೆಗಿನ ಭಯೋತ್ಪಾದನೆ ಮತ್ತು ಅದರ ಎಲ್ಲಾ ರೂಪಗಳ ಭಯೋತ್ಪಾದನೆಯನ್ನು ಎದುರಿಸಬೇಕು ಎಂದರು. ನೇಪಾಳದಲ್ಲಿ ಸುಶೀಲಾ ಕರ್ಕಿ ನೇತೃತ್ವದಲ್ಲಿ ಹೊಸ ಮಧ್ಯಂತರ ಸರ್ಕಾರ ರಚನೆಯಾಗುವುದನ್ನು ಭಾರತ ಸ್ವಾಗತಿಸುತ್ತದೆ. ಪ್ರಧಾನಿ ನರೇಂದ್ರ ಮೋದಿ ಅವರು, ಸುಶೀಲಾ ಕರ್ಕಿಯವರೊಂದಿಗೆ ಆತ್ಮೀಯವಾಗಿ ಮಾತುಕತೆ ನಡೆಸಿದರು. ಶಾಂತಿ ಮತ್ತು ಸ್ಥಿರತೆಯನ್ನು ಪುನಃಸ್ಥಾಪಿಸುವ ಅವರ ಪ್ರಯತ್ನಗಳಿಗೆ ಭಾರತದ ದೃಢವಾದ ಬೆಂಬಲವನ್ನು ಪುನರುಚ್ಚರಿಸಿದರು ಎಂದು ಅವರು ತಿಳಿಸಿದರು.

<><><><>

ಭಾರತೀಯ ರಕ್ಷಣಾ ಪಡೆಗಳು ಅಪರೇಷನ್ ಸಿಂದೂರ ಮೂಲಕ ಶತೃಗಳ ವಿರುದ್ಧ ಭಾರತದ ಪ್ರತೀಕಾರದ ಶಕ್ತಿಯನ್ನು ಪ್ರದರ್ಶಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ೧೯೬೫ರ ಭಾರತ-ಪಾಕಿಸ್ತಾನ ಯುದ್ಧದ ೬೦ ವರ್ಷಗಳ ಸ್ಮರಣಾರ್ಥ

ಏರ್ಪಡಿಸಿರುವ ಕಾರ್ಯಕ್ರಮದಲ್ಲಿ ಯೋಧರನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ರಕ್ಷಣಾ ಪಡೆಗಳ ಸಮನ್ವಯ ಮತ್ತು ಧೈರ್ಯ ಭಾರತಕ್ಕೆ ಸದಾ ಗೆಲುವು ತಂದಿದೆ ಎಂದರು.

<><><>

ಪ್ರಧಾನಿ ನರೇಂದ್ರ ಮೋದಿ ಅವರು, ಗ್ರೀಕ್ ಪ್ರಧಾನಿ ಕಿರಿಯಾಕೋಸ್ ಮಿಟ್ಸೊಟಾಕೀಸ್ ಅವರೊಂದಿಗೆ ದೂರವಾಣಿ ಮೂಲಕ ಮಾತುಕತೆ ನಡೆಸಿದರು. ಭಾರತ-ಗ್ರೀಕ್ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸಲು ಹಾಗೂ ಪ್ರಾದೇಶಿಕ ಸಮೃದ್ಧಿಗಾಗಿ ತಮ್ಮ ಬದ್ಧತೆಯನ್ನು ಉಭಯ ನಾಯಕರು ಪುನರುಚ್ಚರಿಸಿದರು. ವ್ಯಾಪಾರ, ಹೂಡಿಕೆ, ತಂತ್ರಜ್ಞಾನ, ಸಾಗಣೆ, ರಕ್ಷಣೆ, ಭದ್ರತೆ, ಸಂಪರ್ಕ ಮತ್ತು ಜನರಿಂದ ಜನರಿಗೆ ಸಂಬಂಧಗಳಂತಹ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳಲ್ಲಿನ ಬೆಳವಣಿಗೆಯನ್ನು ಉಭಯ ನಾಯಕರು ಸ್ವಾಗತಿಸಿದರು. ಅಲ್ಲದೇ ಪರಸ್ಪರ ಆಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

<><><>

ತೆರಿಗೆ ರಚನೆಯನ್ನು ಸರಳಗೊಳಿಸುವ ಮತ್ತು ನಾಗರಿಕರ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಒಂದು ಮಹತ್ವದ ಹೆಜ್ಜೆಯಾಗಿ, ಈ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯನ್ನು ಘೋಷಿಸಿದರು. ಹೊಸ ತೆರಿಗೆ ದರಗಳು ಸೋಮವಾರದಿಂದ ಜಾರಿಗೆ ಬರಲಿವೆ. ಈ ತಿಂಗಳ ೩ ರಂದು ಜಿಎಸ್‌ಟಿ ಸಮಿತಿಯು ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಯ ಸರಣಿಯನ್ನು ಘೋಷಿಸಿತ್ತು. ಇದು ಆಟೋಮೊಬೈಲ್ ವಲಯದ ಮೇಲಿನ ಗಮನಾರ್ಹ ತೆರಿಗೆ ಕಡಿತದ ಮೂಲಕ ನಾಗರಿಕರಿಗೆ ದೊಡ್ಡ ಪರಿಹಾರವನ್ನು ಒದಗಿಸಿತು. ಹೆಚ್ಚಿನ ಮೋಟಾರು ಕಾರುಗಳು ಮತ್ತು ಮೋಟಾರು ಬೈಕ್‌ಗಳ ತಯಾರಿಕೆಯಲ್ಲಿ ಬಳಸುವ ಉತ್ಪನ್ನಗಳ ಮೇಲಿನ ತೆರಿಗೆಯನ್ನು ಸರ್ಕಾರ ಶೇಕಡ ೨೮ ರಿಂದ ಶೇಕಡ ೧೮ಕ್ಕೆ ಇಳಿಸಿದೆ. ಒಂದು ಸಾವಿರದ ೮೦೦ ಸಿಸಿವರೆಗಿನ ಟ್ರ್ಯಾಕ್ಟರ್‌ಗಳ ಮೇಲಿನ ಜಿಎಸ್‌ಟಿಯನ್ನು ಶೇಕಡ ೫ಕ್ಕೆ ಇಳಿಸಲಾಗಿದ್ದು, ಇದು ದೇಶೀಯ ಮತ್ತು ರಫ್ತು ವಿಭಾಗಗಳಲ್ಲಿ ಬೇಡಿಕೆಯನ್ನು ಹೆಚ್ಚಿಸುವಲ್ಲಿ ಮಹತ್ವದ ಹೆಜ್ಜೆಯಾಗಿದೆ. ತಮಿಳುನಾಡು ನಿವಾಸಿ ಎಸ್‌ವಿಕೆ ವಿನೋದ್ ಮಾಧ್ಯಮದೊಂದಿಗೆ ಮಾತನಾಡಿ, ಜಿಎಸ್‌ಟಿ ಕಡಿತದಿಂದಾಗಿ ಮಧ್ಯಮವರ್ಗದ ಕುಟುಂಬಗಳು ಸ್ವಂತ ವಾಹನವನ್ನು ಖರೀದಿಸುವ ಕನಸು ನನಸಾಗಿದೆ ಎಂದು ಹೇಳಿದ್ದಾರೆ.

<><><>

ಸೇವೆ ಮತ್ತು ಸುಶಾಸನ ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರವು ಪರಿವರ್ತನೆ

ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ - ಸೇವಾ ಪರ್ವದಲ್ಲಿ ಕೇಂದ್ರ ಸರ್ಕಾರವು 'ಬೇಟಿ ಬಚಾವೊ ಬೇಟಿ ಪಡಾವೋ' ಅಭಿಯಾನದ ಮೂಲಕ ಪ್ರತಿ ಹೆಣ್ಣುಮಗುವಿಗೆ ಘನತೆ, ರಕ್ಷಣೆ ಮತ್ತು ಶಿಕ್ಷಣವನ್ನು ಹೇಗೆ ಖಾತರಿಪಡಿಸಿದೆ ಎಂಬುದರ ಕುರಿತು ಒಂದು ವಿಶೇಷ ವರದಿ.

**ಧ್ವನಿ : ಸರ್ವಮಂಗಳ (೧ ನಿಮಿಷ ೧೦ ಸೆಕೆಂಡ್‌ಗಳು)**

ರಾಷ್ಟ್ರದ ಭವಿಷ್ಯಕ್ಕಾಗಿ ನಿರ್ಣಾಯಕವಾದ 'ಬೇಟಿ ಬಚಾವೊ ಬೇಟಿ ಪಡಾವೋ' ಯೋಜನೆಯು ಹೆಣ್ಣು ಮಕ್ಕಳಿಗೆ ಗೌರವ ನೀಡುವ ಮತ್ತು ಅವರಿಗೆ ಶೈಕ್ಷಣಿಕ ಅವಕಾಶಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯ ಮೂಲಕ ಹೆಣ್ಣು ಭ್ರೂಣ ಹತ್ಯೆಯನ್ನು ತಡೆಗಟ್ಟುವಲ್ಲಿ ಯಶಸ್ಸನ್ನು ಸಾಧಿಸಲಾಗಿದೆ. ಅಲ್ಲದೇ ಲಿಂಗಾನುಪಾತವನ್ನು ಸಮತೋಲನಗೊಳಿಸಲು ಪ್ರಯತ್ನಗಳು ನಡೆಯುತ್ತಿವೆ. 'ಬೇಟಿ ಬಚಾವೊ ಬೇಟಿ ಪಡಾವೋ' ಯೋಜನೆ ದಶಕದ ಪ್ರಯಾಣವು ಒಂದು ಯಶಸ್ಸಿನ ಕಥೆಯಾಗಿತ್ತು. ಲಿಂಗಾನುಪಾತವನ್ನು ಸಮತೋಲನಗೊಳಿಸಿ ಮತ್ತು ಮಹಿಳಾ ಸಬಲೀಕರಣಕ್ಕೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುತ್ತಿದೆ. ಈ ಯೋಜನೆಯ ಮೂಲಕ ಹೆಣ್ಣು ಮಕ್ಕಳಿಗೆ ಶಿಕ್ಷಣ, ಕ್ರೀಡೆ ಹಾಗೂ ಕೌಶಲ್ಯಾಭಿವೃದ್ಧಿಯಲ್ಲಿ ಬೆಂಬಲ ನೀಡಲಾಗುತ್ತಿದೆ. ಈ ಕುರಿತು ಹಿಮಾಚಲ ಪ್ರದೇಶದ ಬಿಲಾಸ್‌ಪುರ ಜಿಲ್ಲೆಯ ಜಾಗೃತಿ ಧಿಮಾನ್ ಮಾತನಾಡಿ, ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಖಚಿತಪಡಿಸುವುದು ಪ್ರಧಾನಿ ನರೇಂದ್ರ ಮೋದಿ ಅವರ ಕನಸು. 'ಬೇಟಿ ಬಚಾವೋ ಬೇಟಿ ಪಡಾವೋ' ಯೋಜನೆ ಅದನ್ನು ನನಸಾಗಿಸುವ ಪ್ರಯತ್ನವಾಗಿದ್ದು, ಪ್ರಧಾನಿಯವರ ಸಮರ್ಥ ನಾಯಕತ್ವದಲ್ಲಿ ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಹಾಗೂ ಶಿಕ್ಷಣ ಸಚಿವಾಲಯ ಇದನ್ನು ಸಾಧಿಸಲು ಶ್ರಮಿಸುತ್ತಿವೆ ಎಂದು ಹೇಳಿದರು.

<><><><>

ನಿಯಮ ಉಲ್ಲಂಘಿಸಿದಕ್ಕಾಗಿ ೪೭೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ಚುನಾವಣಾ ಆಯೋಗ ತೆಗೆದು ಹಾಕಿದೆ. ೨೦೧೯ರಿಂದ ನಿರಂತರವಾಗಿ ೬ ವರ್ಷಗಳ ಕಾಲ ಒಂದೇ ಚುನಾವಣೆಯಲ್ಲಿ ಸ್ಪರ್ಧಿಸಬೇಕೆಂಬ ಅಗತ್ಯ ಷರತ್ತನ್ನು ಪೂರೈಸಲು ವಿಫಲವಾದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಮೊದಲ ಹಂತದಲ್ಲಿ ಚುನಾವಣಾ ಆಯೋಗವು ಕಳೆದ ತಿಂಗಳು ೩೩೪ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದುಹಾಕಿತ್ತು. ಕಳೆದ ೨ ತಿಂಗಳಲ್ಲಿ ಒಟ್ಟು ೮೦೮ ನೋಂದಾಯಿತ ಮಾನ್ಯತೆ ಪಡೆಯದ ರಾಜಕೀಯ ಪಕ್ಷಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗಿದೆ.

<><><><>

ಮಕ್ಕಳು, ಹದಿಹರೆಯದ ಬಾಲಕಿಯರು ಮತ್ತು ಗರ್ಭಿಣಿಯರ ಪೋಷಣೆಯನ್ನು ಸುಧಾರಿಸಲು ಕೇಂದ್ರ ಸರ್ಕಾರ ಮಿಷನ್ ಸಕ್ಷಮ್ ಅಂಗನವಾಡಿ ಮತ್ತು ಪೋಷಣ್ ೨.೦ ಅನ್ನು ಕೈಗೊಂಡಿದ್ದು, ಇವು ಪ್ರಮುಖ ಉಪಕ್ರಮಗಳಾಗಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರ ಸಚಿವೆ ಅನ್ನಪೂರ್ಣದೇವಿ ಅವರ ಲೇಖನವನ್ನು ಹಂಚಿಕೊಂಡಿರುವ ಪ್ರಧಾನಿ ಮೋದಿ, ಈ ಯೋಜನೆಗಳ ಮೂಲಕ ದೇಶಾದ್ಯಂತ ಹರಡಿರುವ ಅಂಗನವಾಡಿ ಕೇಂದ್ರಗಳ ಮೂಲಕ ಲಕ್ಷಾಂತರ ಫಲಾನುಭವಿಗಳು ಸಹಾಯ ಪಡೆಯುತ್ತಿದ್ದಾರೆ. ಈ ಯೋಜನೆಗಳು ದೇಶದ ಲಕ್ಷಾಂತರ ಮಕ್ಕಳ ಭವಿಷ್ಯವನ್ನು ರೂಪಿಸುತ್ತಿವೆ ಎಂದರು.

<><><><>

ತಂತ್ರಜ್ಞಾನವು ಭಾರತದ ಶ್ರೇಷ್ಠ ಸಮಾನಾತವಾದಿಯಾಗಿ ಮಾರ್ಪಟ್ಟಿದೆ. ಬೀದಿ ವ್ಯಾಪಾರಿಗಳಿಂದ ಹಿಡಿದು ಕಾರ್ಪೋರೇಟ್ ಕಾರ್ಯನಿರ್ವಹಕರವರೆಗೆ ಎಲ್ಲರನ್ನು ಸಬಲೀಕರಣಗೊಳಿಸಿದೆ ಎಂದು ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೇಖನವೊಂದರಲ್ಲಿ ಸಚಿವರು, ಇಂಡಿಯಾ ಸ್ಟ್ಯಾಕ್, ಯುಪಿಐ, ಜೆಎಎಂ ಟ್ರಿನಿಟಿ ಮತ್ತು ಕೋವಿನ್‌ನಂತಹ ಉಪಕ್ರಮಗಳು ಜೀವನವನ್ನು ಪರಿವರ್ತಿಸಿವೆ, ಆಡಳಿತವನ್ನು ಸುಧಾರಿಸಿವೆ ಮತ್ತು ಜಾಗತಿಕ ವೇದಿಕೆಯಲ್ಲಿ ಭಾರತದ ಪಾತ್ರವನ್ನು ಬಲಪಡಿಸಿವೆ ಎಂದರು.

<><><><>

ಭಾರತದ ಬೆಳವಣಿಗೆಗೆ ಕಡಲ ಆರ್ಥಿಕತೆಯು ಕೇಂದ್ರಬಿಂದುವಾಗಿದ್ದು, ಸಮೃದ್ಧಿ, ಸುಸ್ಥಿರತೆ ಮತ್ತು ರಾಷ್ಟ್ರೀಯ ಶಕ್ತಿಯನ್ನು ಸಂಯೋಜಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರ ಲೇಖನಕ್ಕೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರತಿಕ್ರಿಯಿಸಿದ ಪ್ರಧಾನಿ ಮೋದಿ, ಸಾಗರಮಾಲಾ, ಆಳ ಸಮುದ್ರ ಯೋಜನೆ ಮತ್ತು ಹರಿತ್ ಸಾಗರ್ ಮಾರ್ಗಸೂಚಿಗಳಂತಹ ಉಪಕ್ರಮಗಳು ಸಮುದಾಯಗಳನ್ನು ಸಬಲೀಕರಣಗೊಳಿಸುವಾಗ ಕಡಲ ಸಂಪನ್ಮೂಲಗಳನ್ನು ಬಳಸಿಕೊಳ್ಳುತ್ತವೆ. ನಾವೀನ್ಯತೆಗೆ ಚಾಲನೆ ನೀಡುತ್ತಿದೆ ಮತ್ತು ಜಾಗತಿಕ ಕಡಲ ಆಡಳಿತದಲ್ಲಿ ಭಾರತದ ನಾಯಕತ್ವವನ್ನು ಬಲಪಡಿಸುತ್ತವೆ ಎಂದು ತಿಳಿಸಿದ್ದಾರೆ.

<><><><>

ಖ್ಯಾತ ಅಸ್ಸಾಮಿ ಗಾಯಕ ಜುಬೀನ್ ಗಾರ್ಗ್ ಸಿಂಗಾಪುರದಲ್ಲಿ ಸ್ಕೂಬಾ ಡೈವಿಂಗ್ ವೇಳೆ ನಡೆದ ಅಪಘಾತದಲ್ಲಿ ಸಾವನಪ್ಪಿದ್ದಾರೆ. ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಅವರನ್ನು ಸಿಂಗಾಪುರ ಪೊಲೀಸರು ಸಮುದ್ರದಿಂದ ರಕ್ಷಿಸಿ, ಸ್ಥಳೀಯ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಅವರು ನಿಧನರಾಗಿದ್ದಾರೆ.

<><><><>

ಅಬುಧಾಬಿಯ ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಏಷ್ಯಾ ಕಪ್-೨೦೨೫ ಕ್ರಿಕೆಟ್ ಪಂದ್ಯಾವಳಿಯ ತನ್ನ ಅಂತಿಮ 'ಎ' ಗುಂಪಿನ ಪಂದ್ಯದಲ್ಲಿ ಭಾರತ, ಒಮಾನ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾರತ ಈಗಾಗಲೇ ಎರಡು ಪಂದ್ಯಗಳಿಂದ ನಾಲ್ಕು ಅಂಕಗಳನ್ನು ಗಳಿಸಿ ಸೂಪರ್ ೪ ಹಂತಕ್ಕೆ ಸ್ಥಾನ ಖಚಿತಪಡಿಸಿಕೊಂಡಿದೆ, ಇತ್ತ ಒಮಾನ್ ಪಂದ್ಯಾವಳಿಯಿಂದ ಹೊರಬಿದ್ದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>